# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | (439) ೨೬೮ |
| ಸದಸ್ಯರ ಹೆಸರು | : | ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 23.09.2020. |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿ, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ |

| ಕ್ರ.ಸಂ. | ಪ್ರಶ್ನೆಗಳು. | ಉತ್ತರಗಳು. |
|---|---|---|
| ಅ. | ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಕಳೆದ ಆಗಸ್ಟ್-2020 ರಿಂದ ಸುರಿದ ಭಾರಿ ಮಳೆಗೆ ಸಾಕಷ್ಟು ರಸ್ತೆ ಮತ್ತು ಸಿಡಿಗಳು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು ಬಂದಿರುತ್ತದೆ. |
| ಆ. | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಆಗಸ್ಟ್-2020 ರಲ್ಲಿ ಸುರಿದ ಭಾರಿ ಮಳೆಗೆ ಹಾನಿಗೊಳಗಾದ ರಸ್ತೆ ಮತ್ತು ಸೇತುವೆಗಳ ದುರಸ್ಥಿ ಕಾಮಗಾರಿಗಳಿಗಾಗಿ ರಾಯಚೂರು ಜಿಲ್ಲೆಗೆ ರೂ.340.00 ಲಕ್ಷ ಹಾಗೂ ಕೊಪ್ಪಳ ಜಿಲ್ಲೆಗೆ ರೂ.50.00 ಲಕ್ಷ ಅನುದಾನವನ್ನು ಲೋಕೋಪಯೋಗಿ ಇಲಾಖೆಯ ಸಂಪರ್ಕ ಮತ್ತು ಕಟ್ಟಡಗಳ ಈಶಾನ್ಯ ವಲಯಕ್ಕೆ ಬಿಡುಗಡೆ ಮಾಡಲಾಗಿದೆ.<br><br>ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ-**150A** ಕಿ.ಮೀ.95.400 (ಗೋಲಪಲ್ಲಿ ಸೇತುವೆ) ರಲ್ಲಿರುವ ಬೃಹತ್ ಸೇತುವೆಯು ಹಾನಿಗೊಳಗಾಗಿದ್ದು, ಸದರಿ ಸೇತುವೆಯ ದುರಸ್ಥಿಗಾಗಿ ರೂ.1.00 ಕೋಟಿಗಳ ಮೊತ್ತದ ಅನುದಾನ ಕೋರಿ ಕೇಂದ್ರ ಭೂಸಾರಿಗೆ ಮಂತ್ರಾಲಯಕ್ಕೆ ಪ್ರಸ್ತಾವನೆಯನ್ನು ದಿನಾಂಕ: 02.09.2020 ರಂದು ರಾಷ್ಟ್ರೀಯ ಹೆದ್ದಾರಿ ವಲಯದ ವತಿಯಿಂದ ಸಲ್ಲಿಸಿದ್ದು, ಅನುದಾನ ದೊರೆತ ನಂತರ ಅಂದಾಜುಪಟ್ಟಿ ಸಲ್ಲಿಸಿ, ನಿಯಮಾನುಸಾರ ಕಾಮಗಾರಿ ಕೈಗೊಳ್ಳಲಾಗುವುದು. |
| ಇ. | ಎಷ್ಟು ಗ್ರಾಮಗಳು, ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳು ಸಂಪರ್ಕ ಕಳೆದು ಕೊಂಡಿರುತ್ತವೆ?(ತಾಲ್ಲೂಕುವಾರು ವಿವರ ನೀಡುವುದು); | ರಾಯಚೂರು ಜಿಲ್ಲೆಯಲ್ಲಿ ಹಾಗೂ ಕೊಪ್ಪಳ ಜಿಲ್ಲೆಯಲ್ಲಿ ಯಾವುದೇ ಗ್ರಾಮಗಳು, ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳು ರಸ್ತೆ ಸಂಪರ್ಕ ಕಡಿತಗೊಂಡಿರುವುದಿಲ್ಲ. |

ಕಡತ ಸಂಖ್ಯೆ: ಲೋಇ 155 ಸಿಐಎಸ್ 2020 (ಇ)

(ಗೋವಿಂದ.ಎಂ.ಕಾರಜೋಳ)
ಉಪ ಮುಖ್ಯಮಂತ್ರಿ,
ಲೋಕೋಪಯೋಗಿ ಮತ್ತು
ಸಮಾಜ ಕಲ್ಯಾಣ ಇಲಾಖೆ